ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಪೋಡಿ ಕಾರ್ಯ ಬಾಕಿ ಉಳಿದಿರುವ ಕುರಿತು

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

353 (391) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ರೈತರ ಎಷ್ಟು ಪೋಡಿ ಕಾರ್ಯ ಬಾಕಿ ಉಳಿದಿವೆ ; (ಅಂಕಿ-ಅಂಶ ಸಹಿತ ಮಾಹಿತಿ ನೀಡುವುದು)

(ಆ) ಹಿಂದೆ ಕಂದಾಯ ಇಲಾಖೆ ಹಮ್ಮಿಕೊಂಡಿದ್ದ ಪೋಡಿ ಮೇಳದ ಫಲಿತಾಂಶವೇನು ; ಪೋಡಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ರಾಜ್ಯದಲ್ಲಿ ಈವರೆಗೆ ಎಷ್ಟು ಬಗರ್ ಹುಕುಂ ಅರ್ಜಿಗಳು ವಿಲೇವಾರಿಯಾಗಿವೆ ; ಎಷ್ಟು ಅರ್ಜಿಗಳು ಬಾಕಿ ಉಳಿದಿವೆ ; ಯಾವ ಕಾರಣಕ್ಕೆ ಬಾಕಿ ಉಳಿಸಿಕೊಳ್ಳಲಾಗಿದೆ ;

(ಈ) ಬಗರ್ ಹುಕುಂ ಅರ್ಜಿಗಳ ವಿಲೇವಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ತಾಲ್ಲೂಕುವಾರು ಬಗರ್ ಹುಕುಂ ಅರ್ಜಿ ವಿಲೇವಾರಿ ಮತ್ತು ಬಾಕಿ ಉಳಿದ ಅರ್ಜಿಗಳ ವಿವರ ನೀಡುವುದು)